ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಕಾರ್ಮಿಕರಿಗೆ ಕಾರ್ಡ್‌ಗಳನ್ನು ವಿತರಿಸುವ ಕುರಿತು

ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

643(634) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಇದುವರೆಗೆ ಎಷ್ಟು ಕಾರ್ಮಿಕರಿಗೆ ಕಾರ್ಡ್‌ಗಳನ್ನು ವಿತರಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕಳೆದ 6 ತಿಂಗಳಿನಲ್ಲಿ ವಿತರಿಸಿದ ಕಾರ್ಮಿಕರ ಕಾರ್ಡ್‌ಗಳ ಜಿಲ್ಲಾವಾರು ವಿವರ ನೀಡುವುದು; ಅದರಲ್ಲಿ ಕಾರ್ಮಿಕರ ಕಾರ್ಡ್ ಪಡೆದ ಮಹಿಳೆಯರ ಸಂಖ್ಯೆ ಎಷ್ಟು;

(ಇ) ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ಗರ್ಭಿಣಿ ಕಾರ್ಮಿಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತದೆ; ಮಗುವಿನ ಜನನದ ಬಳಿಕ 6 ತಿಂಗಳ ಕಾಲ ಪಿಂಚಣಿ ನೀಡುವ ಯೋಜನೆ ಜಾರಿಯಲ್ಲಿದೆಯೇ; ಕಳೆದ 2 ವರ್ಷಗಳಲ್ಲಿ ಈ ಸೌಲಭ್ಯವನ್ನು ಎಷ್ಟು ಮಹಿಳಾ ಕಾರ್ಮಿಕರಿಗೆ ನೀಡಲಾಗಿದೆ?